ಶ್ರೀ ಬಿ.ಸಿ. ಪಾಟೀಲ್ (ಹಿರೇಕೆರೂರು) :-

1066 (1230) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

ಅ) ರಾಜ್ಯದಲ್ಲಿ ಎಷ್ಟು ಮಕ್ಕಳಿಗೆ ಅಕ್ಷರ ದಾಸೋಹದ ಯೋಚನೆಯು ತಲುಪುತ್ತಿದೆ;

ಆ) ಅಕ್ಷರ ದಾಸೋಹ ಯೋಜನೆಯನ್ನು ಸರಿಯಾಗಿ ನಿರ್ವಹಿಸಲಾಗುತ್ತಿದೆಯೇ;

ಇ) ಈ ಯೋಜನೆಯನ್ನು ಖಾಸಗಿ ಪ್ರೌಢಶಿಕ್ಷಣ ಸಂಸ್ಥೆಗಳಿಗೆ ವಿಸ್ತರಿಸಿರುವುದು ಸರಿಯೇ?

ಶ್ರೀ ಬಸವರಾಜ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :-

ಅ) ರಾಜ್ಯದಲ್ಲಿ ತರಗತಿ 1 ರಿಂದ 7ರ ವರೆಗಿನ ಸರ್ಕಾರಿ ಹಾಗೂ ಅನುದಾನಿತ ಪ್ರಾಥಮಿಕ ಶಾಲೆಗಳಲ್ಲಿನ 53.58 ಲಕ್ಷ ಮಕ್ಕಳಿಗೆ ಅಕ್ಷರ ದಾಸೋಹ ಯೋಜನೆ ತಲುಪುತ್ತಿದೆ. 8 ರಿಂದ 10ರ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ 01-06-2007 ರಿಂದ ವಿಸ್ತರಿಸಲಾಗಿದ್ದು 18.18 ಲಕ್ಷ ಮಕ್ಕಳಿಗೆ ಅಕ್ಷರ ದಾಸೋಹ ಯೋಜನೆ ತಲುಪುತ್ತಿದೆ.

ಆ) ಹೌದು

ಇ) ಸರ್ಕಾರಿ ಮತ್ತು ಖಾಸಗಿ ಅನುದಾನಿತ ಶಾಲೆಗಳಿಗೆ ಈ ಯೋಜನೆಯನ್ನು ವಿಸ್ತರಿಸಲಾಗಿದೆ ಖಾಸಗಿ ಅನುದಾನರಹಿತ ಶಾಲೆಗಳು ಈ ಯೋಜನೆಯಡಿ ಸೇರುವುದಿಲ್ಲ.

ಶ್ರೀ ಪಾಟೀಲ್ ಡಿ.ಆರ್. (ಗದಗ್) :-

1067 (1404) ಮಾನ್ಯ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಹಾಗೂ ಸಕ್ಕರೆ ಸಚಿವರು ಈ ಕೆಳಕಂಡ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

ಅ) ರಾಜ್ಯದಲ್ಲಿ ಕಬ್ಬಿನ ಬೆಳೆಯ ಒಟ್ಟು ಕ್ಷೇತ್ರಗಳು ಎಷ್ಟು; (ಜಿಲ್ಲಾವಾರು ವಿವರ ನೀಡುವುದು);

ಆ) ರಾಜ್ಯದಲ್ಲಿ ಉತ್ಪಾದನೆಯಾದ ಒಟ್ಟು ಕಬ್ಬು ಎಷ್ಟು ; (ಜಿಲ್ಲಾವಾರು ವಿವರ ನೀಡುವುದು);

ಇ) ರಾಜ್ಯದ ಒಟ್ಟು ಕಬ್ಬಿನಲ್ಲಿ ಸಕ್ಕರೆ ಕಾರ್ಖಾನೆಗಳು ನುರಿಸಿದ ಕಬ್ಬು ಎಷ್ಟು; ಈ ಕಬ್ಬಿಗೆ ಕಾರ್ಖಾನೆಗಳು ನಿಗದಿಪಡಿಸಿದ ಟನ್ನಿನ ದರ ಎಷ್ಟು; ಈವರೆಗೆ ಪ್ರತಿ ಟನ್ನಿಗೆ